ಕರ್ನಾಟಕ ಸರ್ಕಾರ

ಸಾರ್ವಜನಿಕ ಶಿಕ್ಷಣ ಇಲಾಖೆ

ಆಯುಕ್ತರ ಕಛೇರಿ,ಹೊಸ ಸಾರ್ವಜನಿಕ ಕಟ್ಟಡಗಳು,ನೃಪತುಂಗ ರಸ್ತೆ, ಬೆಂಗಳೂರು-560001

ಸಂಖ್ಯೆ:ಸಶಿಅ/ಶಿ.ಹ.ಕೋ/ದಾಖಲಾತಿ/07/2014-15 ದಿನಾಂಕ: 20.04.2015

## : : ಸಾರ್ವಜನಿಕ ಪ್ರಕಟಣೆ: :

ವಿಷಯ: ಶಿಕ್ಷಣ ಹಕ್ಕು ಕಾಯ್ದೆಯಡಿ 2015-16ನೇ ಸಾಲಿಗೆ ಆನ್‌ಲೈನ್ ಲಾಟರಿ ಮೂಲಕ 2ನೇ ಹಂತದ ಸೀಟು ಹಂಚಿಕೆ ಬಗ್ಗೆ.

ಉಲ್ಲೇಖ:1. ಸುತ್ತೋಲೆ ಸಂ: ಸಶಿಅ/ಶಿಹಕೋ/ದಾಖಲಾತಿ/07/2014-15 ದಿನಾಂಕ: 17-12-2014.

2.ಸಮಸಂಖ್ಯೆಯ ದಿನಾಂಕ: 31-12-2014ರ ಸುತ್ತೋಲೆ ಮತ್ತು ಸಾರ್ವಜನಿಕ ಪ್ರಕಟಣೆ.

3.ಸಮಸಂಖ್ಯೆಯ ಸುತ್ತೋಲೆ ದಿನಾಂಕ: 11-03-2015, 18-03-2015.

4.ಸಮಸಂಖ್ಯೆಯ ದಿನಾಂಕ: 28-03-2015ರ ಸಾರ್ವಜನಿಕ ಪ್ರಕಟಣೆ.

--

ಶಿಕ್ಷಣ ಹಕ್ಕು ಕಾಯಿದೆಯಡಿ 2015-16 ನೇ ಸಾಲಿಗೆ ದಿನಾಂಕ: 11.03.2015 ರಂದು ಮೊದಲ ಹಂತದ ಆನ್‌ಲೈನ್ ಲಾಟರಿ ಪ್ರಕ್ರಿಯೆ ನಡೆಸಲಾಗಿದ್ದು, ಸೀಟು ಹಂಚಿಕೆಯಾದ ಪೋಷಕರಿಗೆ ಅದೇ ದಿನ ಎಸ್.ಎಂ.ಎಸ್ ಮೂಲಕ ಸಂದೇಶ ಕಳುಹಿಸಲಾಗಿದೆ. ಮೊದಲನೇ ಹಂತದಲ್ಲಿ ಸೀಟು ಹಂಚಿಕೆಯಾಗಿದ್ದು, ಪ್ರವೇಶ ಪಡೆಯದೆ ಖಾಲಿ ಉಳಿದಿರುವ ಸೀಟುಗಳಿಗೆ ಎರಡನೇ ಹಂತದ ಆನ್‌ಲೈನ್ ಲಾಟರಿ ಪ್ರಕ್ರಿಯೆಯನ್ನು ದಿನಾಂಕ: 20.04.2015 ರಂದು ನಡೆಸಲಾಗಿದೆ.

ಎರಡನೇ ಹಂತದ ಆನ್‌ಲೈನ್ ಲಾಟರಿ ಪ್ರಕ್ರಿಯೆಯಲ್ಲಿ ಸೀಟು ಹಂಚಿಕೆಯಾದ ಪೋಷಕರು ದಿನಾಂಕ: 30.04.2015 ರೊಳಗೆ ಶಿಕ್ಷಣ ಹಕ್ಕು ಕಾಯಿದೆಯಡಿ ಸೀಟು ಹಂಚಿಕೆಯಾಗಿರುವ ಶಾಲೆಯಲ್ಲಿ ಸಂಬಂಧಿಸಿದ ಮಗುವನ್ನು ದಾಖಲು ಮಾಡಿಸಲು ಈ ಮೂಲಕ ತಿಳಿಯಪಡಿಸಲಾಗಿದೆ. ಎರಡನೇ ಹಂತದ ಲಾಟರಿಯಲ್ಲಿ ಹಂಚಿಕೆಯಾಗಿರುವ ಸೀಟುಗಳನ್ನು ಸಂಬಂಧಿಸಿದ ಶಾಲೆಗಳಲ್ಲಿ ದಾಖಲಾತಿ ಮಾಡಿಸಲು ಸಂಬಂಧಿಸಿದ ಕ್ಷೇತ್ರ ಶಿಕ್ಷಣಾಧಿಕಾರಿಗಳು ಕಟ್ಟುನಿಟ್ಟಿನ ಕ್ರಮ ತೆಗೆದುಕೊಳ್ಳಲು ಸಂಬಂಧಿಸಿದ ಶಾಲಾ ಮುಖ್ಯಸ್ಥರಿಗೆ ನಿರ್ದೇಶನ ನೀಡುವುದು. ಸದರಿ ದಿನಾಂಕದೊಳಗೆ ಪ್ರವೇಶ ಪಡೆಯದ ಸೀಟುಗಳು ತಂತಾನೇ ರದ್ದಾಗುತ್ತವೆ. ಯಾವುದೇ ಕಾರಣಕ್ಕೂ ಪ್ರವೇಶದ ದಿನಾಂಕವನ್ನು ಮುಂದೂಡಲಾಗುವುದಿಲ್ಲ.

ಪ್ರವೇಶ ಪ್ರಕ್ರಿಯೆ ಮುಗಿದ ಕೂಡಲೇ ಸಂಬಂಧಿಸಿದ ಕ್ಷೇತ್ರ ಶಿಕ್ಷಣಾಧಿಕಾರಿಗಳು ಅಂದಂದಿಗೆ ದಾಖಲಾದ ಮಕ್ಕಳ ಮಾಹಿತಿಯನ್ನು ಆನ್‌ಲೈನ್ ತಂತ್ರಾಂಶದಲ್ಲಿ ಗಣಕೀಕರಿಸುವುದು. ಈ ಬಗ್ಗೆ ಯಾವುದೇ ರೀತಿಯ ವಿಳಂಬವನ್ನು ಗಂಭೀರವಾಗಿ ಪರಿಗಣಿಸಿ ಸಂಬಂಧಿಸಿದವರ ವಿರುದ್ಧ ಕಟ್ಟುನಿಟ್ಟಾದ ಕ್ರಮ ತೆಗೆದುಕೊಳ್ಳಲಾಗುವುದು.

(ಮೊಹಮ್ಮದ್ ಮೊಹಸಿನ್, ಭಾ.ಆ.ಸೇವೆ)
ಆಯುಕ್ತರು,
ಸಾರ್ವಜನಿಕ ಶಿಕ್ಷಣ ಇಲಾಖೆ

1. ರಾಜ್ಯದ ಎಲ್ಲಾ ಉಪನಿರ್ದೇಶಕರು(ಆಡಳಿತ), ಸಾರ್ವಜನಿಕ ಶಿಕ್ಷಣ ಇಲಾಖೆ, ರವರಿಗೆ ಸೂಕ್ತ ಕ್ರಮಕ್ಕಾಗಿ.
2. ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಸೂಕ್ತ ಕ್ರಮಕ್ಕಾಗಿ (ಉಪನಿರ್ದೇಶಕರು(ಆಡಳಿತ) ರವರ ಮುಖಾಂತರ.